REGISTERED WITH RNI NEW DELHI REG. N0.69683/97-Postal Registration No.RNP/KA/BGS/2259/2024-2026
Office of Posting: Bangalore PSO, Bangalore - 560026.; Date of Posting & Publishing Every Wednesday; Price Rs. 2 (Pages-8)

ಪಟ್ಟಣ ಸಹಕಾರ ಬ್ಯಾಂಕುಗಳ

# ವಾರ್ತಾ ಪತ್ರಿಕೆ

ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಅಧಿಕೃತ ಕನ್ನಡ ವಾರಪತ್ರಿಕೆ

ಸಂಪುಟ : 32 | ಸಂಚಿಕೆ : 13 | 02 ಜುಲೈ 2025 | ಬುಧವಾರ | ಪುಟಗಳು : 8 | ಬೆಲೆ : 2/-

## ದಿನಾಂಕ:24.06.2025ರಂದು ವಿಜಯಪುರದಲ್ಲಿ

## ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಮತ್ತು ಅಧಿಕಾರಿಗಳಿಗೆ ಒಂದು ದಿನದ ರಾಜ್ಯಮಟ್ಟದ ತರಬೇತಿ ಶಿಬಿರ




**ವಿಜಯಪುರ:** ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳವು ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಮತ್ತು ಅಧಿಕಾರಿಗಳಿಗೆ ದಿನಾಂಕ: 24.06.2025ರಂದು ವಿಜಯಪುರದ ಮಧುವನ ಇಂಟರ್‌ನ್ಯಾಷನಲ್ ಹೊಟೇಲ್‌ನಲ್ಲಿ ಏರ್ಪಡಿಸಿದ್ದ ಒಂದು ದಿನದ ರಾಜ್ಯಮಟ್ಟದ ತರಬೇತಿ ಶಿಬಿರವನ್ನು ಮಹಾಮಂಡಳದ ನಿರ್ದೇಶಕರುಗಳಾದ ಶ್ರೀಮತಿ ಮಲ್ಲಮ್ಮಾ ಶಿ. ಯಾಳವಾರ ಮತ್ತು ಶ್ರೀ ರಾಜಕುಮಾರ ಬಸವರಾಜ ಬಾದವಾಡಗಿ ರವರು ಉದ್ಘಾಟಿಸಿದರು.

ಮಹಾಮಂಡಳದ ನಿರ್ದೇಶಕರಾದ ಶ್ರೀಮತಿ ಮಲ್ಲಮ್ಮಾ ಶಿ. ಯಾಳವಾರ ರವರು ಮಾತನಾಡಿ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳವು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಮತ್ತು ಅಧಿಕಾರಿಗಳಿಗೆ ತರಬೇತಿ ಶಿಬಿರಗಳನ್ನು ಏರ್ಪಡಿಸಿ, ಪಟ್ಟಣ ಸಹಕಾರ ಬ್ಯಾಂಕುಗಳ ಬೆಳವಣಿಗೆಗೆ ಶ್ರಮಿಸುತ್ತಿದೆ. ಪಟ್ಟಣ ಸಹಕಾರ ಬ್ಯಾಂಕುಗಳಲ್ಲಿ ಅಧಿಕಾರಿ ವರ್ಗದವರು ಉತ್ತಮವಾಗಿ ಕಾರ್ಯನಿರ್ವಹಿಸಿದರೆ ಮಾತ್ರ ಬ್ಯಾಂಕುಗಳ ಪ್ರಗತಿ ಸಾಧ್ಯವಾಗುತ್ತದೆ. ಪಟ್ಟಣ ಸಹಕಾರ ಬ್ಯಾಂಕುಗಳ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇಂತಹ ತರಬೇತಿ ಶಿಬಿರದಲ್ಲಿ ಭಾಗವಹಿಸಿ, ತರಬೇತಿಯ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು.

ಮಹಾಮಂಡಳದ ನಿರ್ದೇಶಕರಾದ ಶ್ರೀ ರಾಜಕುಮಾರ ಬಸವರಾಜ ಬಾದವಾಡಗಿ ರವರು ಮಾತನಾಡಿ ಪಟ್ಟಣ ಸಹಕಾರ ಬ್ಯಾಂಕುಗಳ ಮುಖ್ಯಕಾರ್ಯನಿರ್ವಹಾಧಿಕಾರಿಗಳು ಮತ್ತು ಅಧಿಕಾರಿಗಳಿಗೆ ಹಲವಾರು ಕಾರ್ಯಕ್ರಮಗಳನ್ನು ಏರ್ಪಡಿಸುತ್ತಾ ಬಂದಿರುತ್ತದೆ. ಪ್ರತಿ ತಿಂಗಳಿಗೊಮ್ಮೆ ತರಬೇತಿ ವಿಚಾರ ಸಂಕಿರಣ ಕಾರ್ಯಾಗಾರಗಳನ್ನು ಮಹಾಮಂಡಳದ ಅಧ್ಯಕ್ಷರಾದ ಸನ್ಮಾನ್ಯ ಶ್ರೀ ಎಚ್.ಕೆ. ಪಾಟೀಲರ ನಿರ್ದೇಶನದ ಅನ್ವಯ ಮಹಾಮಂಡಳ ಆಯೋಜಿಸುತ್ತಾ ಬಂದಿದೆ. ನಮ್ಮ ಪಟ್ಟಣ ಸಹಕಾರ ಬ್ಯಾಂಕುಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ನಿವಾರಿಸಿಕೊಳ್ಳಲಿಕ್ಕೆ ಇಂತಹ ತರಬೇತಿ ಶಿಬಿರಗಳು ಅನುಕೂಲವಾಗುತ್ತವೆ ಎಂದರು.

ತರಬೇತಿ ಶಿಬಿರದ ಮುಕ್ತಾಯ ಸಮಾರಂಭದಲ್ಲಿ ಶಾಸಕರು ಹಾಗೂ ಮಹಾಮಂಡಳದ ನಿರ್ದೇಶಕರಾದ ಶ್ರೀ ಅಶೋಕ ಎಂ.ಮನಗೂಳಿ ರವರು ಮಾತನಾಡಿ ಮಹಾಮಂಡಳದ ಅಧ್ಯಕ್ಷರಾದ ಶ್ರೀ ಎಚ್.ಕೆ.ಪಾಟೀಲರ

3ನೇ ಪುಟಕ್ಕೆ...

ತುಮಕೂರು ವೀರಶೈವ ಸಹಕಾರ ಬ್ಯಾಂಕಿನಿಂದ ಮುಖ್ಯಮಂತ್ರಿಗಳಿಗೆ ಗೌರವ ಸಲ್ಲಿಕೆ 4

ಶ್ರೀ ಲಕ್ಷ್ಮೀ ಮಹಿಳಾ ಸಹಕಾರ ಬ್ಯಾಂಕ್ : 31ನೇ ವಾರ್ಷಿಕ ಮಹಾಸಭೆ 5

ನಿಮ್ಮ ಪ್ರಶ್ನೆ – ನಮ್ಮ ಉತ್ತರ 7

## ಸಂಪಾದಕೀಯ
## ಆತ್ಮೀಯ ಸಹಕಾರಿಗಳೇ...



### ಯುವ ಜನತೆ ತಮ್ಮ ಜೀವನ ಶೈಲಿ ಬದಲಿಸಿಕೊಳ್ಳಬೇಕಿದೆ

ಇತ್ತೀಚಿನ ದಿನಗಳಲ್ಲಿ ಎಲ್ಲರನ್ನೂ ಎಲ್ಲೆಂದರಲ್ಲಿ ಹಠಾತ್ ಹೃದಯಾಘಾತದಿಂದ ಸಾವನಪ್ಪುತ್ತಿರುವರ ಸಂಖ್ಯೆ ಹೆಚ್ಚಾಗಿದೆ. ಹಿಂದೆ ಇಳಿವಯಸ್ಸಿನವರಲ್ಲಿ ಕಾಣಿಸುತ್ತಿದ್ದ ಹೃದಯಾಘಾತ ಈಗ ಯುವಜನತೆಯಲ್ಲಿ ಸಾಮಾನ್ಯವೆಂಬಂತಾಗಿದೆ. ದೈಹಿಕವಾಗಿ ಸದೃಢವಾಗಿದ್ದ ವಿದ್ಯಾರ್ಥಿಗಳು ಶಾಲಾ ಆವರಣದಲ್ಲಿ ಕ್ರಿಕೆಟ್ ಇನ್ನಿತರ ಆಟವಾಡುತ್ತಲೇ ಹಠಾತ್ ಹೃದಯಾಘಾತದಿಂದ ಸಾವನ್ನಪ್ಪುತ್ತಿರುವ ಸುದ್ದಿಗಳು ಬರುತ್ತಿವೆ.

ಪಾಠ ಮಾಡುತ್ತಿರುವಾಗಲೇ ಶಿಕ್ಷಕರು ಕುಸಿದು ಬಿದ್ದು ಸಾವನ್ನಪ್ಪುತ್ತಿದ್ದಾರೆ. ಕೆಲಸ ಮಾಡುತ್ತಲ್ಲೇ ಜೀವ ಬಿಡುತ್ತಿರುವವರು, ಬ್ಯಾಂಕುಗಳಲ್ಲಿ ಕೌಂಟರಿನಲ್ಲಿ ಹಣ ಎಣಿಸುವಾಗಲೇ ಮೃತಪಟ್ಟವರು ಇದ್ದಾರೆ. ಹೀಗೆ ಸಾವನಪ್ಪುತ್ತಿರುವರ ವರದಿಗಳು ನಗರ, ಪಟ್ಟಣದಿಂದ ಹಿಡಿದು ಗ್ರಾಮೀಣ ಭಾಗಗಳಿಂದಲೂ ಬರುತ್ತಿವೆ. ಖ್ಯಾತ ಸಿನಿಮಾ ತಾರೆಗಳಿಂದ ಹಿಡಿದು ಕಿರುತೆರೆ ಕಲಾವಿದರೂ ಹೃದಯಾಘಾತಕ್ಕೆ ಒಳಗಾಗುತ್ತಿದ್ದಾರೆ.

ಇಂದಿನ ಯುವಜನತೆಯಲ್ಲಿ ಹೃದಯಾಘಾತ, ಹೃದಯಸ್ತಂಭನ ಹೆಚ್ಚುತ್ತಿದೆ. ಅಧಿಕ ರಕ್ತದೊತ್ತಡ, ಮಧುಮೇಹ ಮತ್ತು ಅಧಿಕ ಕೊಲೆಸ್ಟ್ರಾಲ್. ಜತೆಗೆ ಬದಲಾದ ಜೀವನಶೈಲಿ ಹಾಗೂ ಧೂಮಪಾನ, ತಂಬಾಕು ಸೇವನೆ, ಮಾದಕ ವ್ಯಸನದಂತ ದುಶ್ಚಟಗಳು ಮುಖ್ಯ ಕಾರಣ ಎನ್ನುತ್ತಾರೆ ವೈದ್ಯಕಿಯ ತಜ್ಞರು.

ನಿಜ, ಇಂದಿನ ಯುವಜನತೆ ದುಶ್ಚಟಗಳಿಗೆ ಬೇಗನೆ ಆಕರ್ಷಿತರಾಗುತ್ತಿದ್ದಾರೆ. ಶಿಸ್ತಿಲ್ಲದ ಜೀವನ, ನಿತ್ಯ ಮಲಗುವ ಏಳುವ ವಿಷಯದಲ್ಲಿ ಸಮಯ ಪಾಲನೆ ಇಲ್ಲದಿರುವುದು, ವ್ಯಾಯಾಮ, ಬೆಳಗಿನ ಉತ್ತಮ ನಡಿಗೆ ಸೇರಿದಂತೆ ದೈಹಿಕ ಚಟುವಟಿಕೆಗಳೇ ಇಲ್ಲದಿರುವುದು, ನಾಲಗೆಗೆ ರುಚಿ ಎಂದು ಪದೆ ಪದೇ ಜಂಕ್ ಫುಡ್ ಹಾಗೂ ಪಾನಿಯಗಳನ್ನು ಸೇವನೆ ಮಾಡುವುದನ್ನು ಅಭ್ಯಾಸ ಮಾಡಿಕೊಳ್ಳುತ್ತಿದ್ದಾರೆ. ಆಕರ್ಷಕ ದೇಹದಾರ್ಢ್ಯ ಹೊಂದುವ ಸಲುವಾಗಿ, ಮಾಂಸಖಂಡಗಳನ್ನು ಹುರಿಗೊಳಿಸಲು ಜಿಮ್ ಸಮಯ ಪಾಲನೆ ಇಲ್ಲದೆ ಬೆವರು ಸುರಿಸುತ್ತಿದ್ದಾರೆ. ಅಲ್ಲಿ ನೀಡುವ ಅವೈಜ್ಞಾನಿಕ ಪ್ರೊಟೀನ್ ಸಪ್ಲಿಮೆಂಟ್‌ಗಳನ್ನು ಸೇವನೆ ಮಾಡುತ್ತಿದ್ದಾರೆ. ಈ ಎಲ್ಲವೂ ಹೃದಯದ ಮೇಲೆ ಅಪಾರ ಒತ್ತಡ ಉಂಟುಮಾಡಿ ಹಠಾತ್ ಹೃದಯಾಘಾತಕ್ಕೆ ಒಳಗಾಗುವ ಕಾರಣವಾಗಿದೆ.

ಮುಖ್ಯವಾಗಿ ಯುವಕರು ತಮ್ಮ ಜೀವನ ಶೈಲಿ ಬದಲಿಸಿಕೊಳ್ಳಬೇಕಿದೆ. ಸ್ಥೂಲಕಾಯ, ಮಧುಮೇಹ ಹಾಗೂ ರಕ್ತದೊತ್ತಡ ಹೆಚ್ಚಿಸುವ ಆಹಾರ, ಪಾನಿಯಗಳ ಮೇಲೆ ನಿಯಂತ್ರಣವಿರಲಿ. ಮುಖ್ಯವಾಗಿ ಮನೆಯಲ್ಲಿ ಮಾಡಿದ ಆಹಾರ ಸೇವನೆ ಉತ್ತಮ. ಹೊರಗಿನ ಕುರುಕುಲು ತಿನಸುಗಳು, ಪಾನಿಯಗಳು ದೇಹದಲ್ಲಿ ಕೊಬ್ಬಿನಂಶ ಹೆಚ್ಚಳಕ್ಕೆ ಕಾರಣವಾಗುತ್ತದೆ. ಧೂಮಪಾನ, ಮಾದಕ ಪಾನಿಯಗಳ ಸೇವನೆ ತ್ಯಜಿಸಬೇಕಿದೆ. ದೈಹಿಕ ಚಟುವಟಿಕೆ ಕಡೆ ಗಮನಹರಿಸಬೇಕಿದೆ.

ರಾಜ್ಯ ಸರ್ಕಾರ ಈ ಬಗೆಯ ಸರಣಿ ಹೃದಯಾಘಾತ ಪ್ರಕರಣಗಳ ಬಗ್ಗೆ ಅಧ್ಯಯನ ನಡೆಸಲು ತಜ್ಞರ ಸಮಿತಿ ನೇಮಿಸಿದೆ. ಹೃದಯಘಾತದಿಂದಾಗುವ ಸಾವುಗಳನ್ನು ತಡೆಗಟ್ಟಲು ರಾಜ್ಯದ 86 ತಾಲೂಕುಗಳ ಆರೋಗ್ಯ ಕೇಂದ್ರಗಳಲ್ಲಿ ಸ್ಟೆಮಿ ಯೋಜನೆ ಜಾರಿಗೊಳಿಸಿದೆ. ಈ ಕೇಂದ್ರಗಳಲ್ಲಿ ಎದೆ ನೋವು ಎಂದು ಬಂದವರನ್ನು ಇಸಿಜಿಗೆ ಒಳಪಡಿಸಿ ಅದರ ವರದಿಯನ್ನು ಆನ್ಲೈನ್ ಮೂಲಕ ಬೆಂಗಳೂರಿನ ಜಯದೇವ ಹೃದಯ ತಜ್ಞರಿಗೆ ಕಳಿಸಿ ಅಲ್ಲಿನ ಹೃದಯ ತಜ್ಞರ ಮಾರ್ಗದರ್ಶನದಲ್ಲಿ ಚಿಕಿತ್ಸೆ ನೀಡಿ ಸಂಭವನೀಯ ಸಾವನ್ನು ತಪ್ಪಿಸಬಹುದಾಗಿದೆ. ಸಮಸ್ಯೆಗೆ ಕೂಡಲೆ ಸ್ಪಂದಿಸಿರುವ ರಾಜ್ಯ ಸರ್ಕಾರಕ್ಕೆ ಧನ್ಯವಾದಗಳನ್ನು ಹೇಳಬಯಸುತ್ತೇನೆ.

▸▸ ಎಚ್.ಕೆ. ಪಾಟೀಲ

## ಆದಾಯ ತೆರಿಗೆ ಸಂಗ್ರಹದಲ್ಲಿ ಇಳಿಕೆ, ಅಧಿಕಾರಿಗಳಿಗೆ ಮಹತ್ವದ ಸೂಚನೆ ನೀಡಿದ ನಿರ್ಮಲಾ ಸೀತಾರಾಮನ್

**ಹೊಸದಿಲ್ಲಿ:** "ತೆರಿಗೆ ಸಂಬಂಧಿತ ವ್ಯಾಜ್ಯಗಳನ್ನು ತ್ವರಿತವಾಗಿ ಬಗೆಹರಿಸಬೇಕು. ಈ ನಿಟ್ಟಿನಲ್ಲಿ ಪಾರದರ್ಶಕ ಹಾಗೂ ಗ್ರಾಹಕ ಸ್ನೇಹಿ ಕ್ರಮಗಳನ್ನು ಕೈಗೊಳ್ಳಬೇಕು," ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಆದಾಯ ತೆರಿಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಹಿರಿಯ ಅಧಿಕಾರಿಗಳ ಸಭೆ ನಡೆಸಿರುವ ಅವರು, "ತೆರಿಗೆದಾರರ ಕುಂದುಕೊರತೆಗಳನ್ನು ಕಾಲಮಿತಿಯೊಳಗೆ ಬಗೆಹರಿಸುವುದು ಅಗತ್ಯ," ಎಂದು ಹೇಳಿದರು.

"ಪ್ರಸಕ್ತ ಹಣಕಾಸು ವರ್ಷದಲ್ಲಿ ಜೂನ್ 19ರವರೆಗೆ ನಿವ್ವಳ ತೆರಿಗೆ ಸಂಗ್ರಹ ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇ. 1.4ರಷ್ಟು ಕುಸಿದಿದೆ. ಬಾಕಿ ಇರುವ 5.77 ಲಕ್ಷ ಮೇಲ್ಮನವಿಗಳನ್ನು ತ್ವರಿತವಾಗಿ ವಿಲೇವಾರಿಗೊಳಿಸಿದರೆ ತೆರಿಗೆ ಸಂಗ್ರಹವೂ ಹೆಚ್ಚುತ್ತದೆ. ತೆರಿಗೆ ತಕರಾರುಗಳು ತ್ವರಿತವಾಗಿ ಬಗೆಹರಿದರೆ ತೆರಿಗೆದಾರರ ವಿಶ್ವಾಸವೂ ವೃದ್ಧಿಸುತ್ತದೆ," ಎಂದು ನಿರ್ಮಲಾ ಪ್ರತಿಪಾದಿಸಿದರು.

"ಕೇಂದ್ರೀಯ ನೇರ ತೆರಿಗೆ ಮಂಡಳಿ (ಸಿಬಿಡಿಟಿ) ಇತ್ತೀಚಿನ ವರ್ಷಗಳಲ್ಲಿ ಹಲವಾರು ಮಹತ್ವದ ಸುಧಾರಣೆಗಳನ್ನು ಕೈಗೊಂಡಿದೆ. ವಿಶೇಷವಾಗಿ ಫೇಸ್‌ಲೆಸ್ ಅಸೆಸ್‌ಮೆಂಟ್, ಇ–ವೆರಿಫಿಕೇಶನ್ ಸಿಸ್ಟಮ್, ತೆರಿಗೆ ವಿನಾಯಿತಿ, ತೆರಿಗೆ ಸ್ಲಾಬ್ ದರಗಳಲ್ಲಿ ಬದಲಾವಣೆಯಂತಹ ಪ್ರಮುಖ ಬದಲಾವಣೆಗಳನ್ನು ತಂದಿದೆ," ಎಂಬುದನ್ನು ಪ್ರಸ್ತಾಪಿಸಿದ ಅವರು, "ನಿಯಮಗಳ ಪಾಲನೆ ಮತ್ತು ಅದರ ಅನುಸರಣೆ ಪ್ರಕ್ರಿಯೆಗಳು ರಚನಾತ್ಮಕವಾಗಿರಬೇಕು. ಅವು ತೆರಿಗೆದಾರರಿಗೆ ಸುಲಭ ಎಂದೆನಿಸಬೇಕು. ಮಂಡಳಿಯು ಯಾವ ಸಂಗತಿಯನ್ನೂ ಸಂಕೀರ್ಣಗೊಳಿಸಬಾರದು," ಎಂದು ಸಲಹೆ ನೀಡಿದರು.

"ಹೊಸ ಆದಾಯ ತೆರಿಗೆ ಕಾಯಿದೆ ತಿದ್ದುಪಡಿ ವಿಧೇಯಕವನ್ನು ಸಂಸತ್‌ನ ಮುಂಗಾರು ಅಧಿವೇಶನದಲ್ಲಿ ಮಂಡಿಸುವ ಸಾಧ್ಯತೆ ಇದೆ. ಇದು ಕಾನೂನಾದ ಕೂಡಲೇ ತೆರಿಗೆ ಪಾವತಿ ಪ್ರಕ್ರಿಯೆ ಸುಲಭ ಮತ್ತು ಸರಳವಾಗುತ್ತದೆ. ಅದನ್ನು ಜನರಿಗೆ ಮುಟ್ಟಿಸಲು ತೆರಿಗೆ ಇಲಾಖೆ ದೇಶಾದ್ಯಂತ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಬೇಕಾಗುತ್ತದೆ. ಇದಕ್ಕೆ ಸಜ್ಜುಗೊಳ್ಳಬೇಕು," ಎಂದು ಹಣಕಾಸು ಸಚಿವರು ಹೇಳಿದರು.

...1ನೇ ಪುಟದಿಂದ




ನೇತೃತ್ವದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಪಟ್ಟಣ ಸಹಕಾರ ಬ್ಯಾಂಕುಗಳ ಆಡಳಿತ ಮಂಡಳಿ ಸದಸ್ಯರಿಗೆ, ಸಿಬ್ಬಂದಿ ವರ್ಗದವರಿಗೆ ವಿಚಾರ ಸಂಕಿರಣ ಕಾರ್ಯಾಗಾರಗಳನ್ನು ಏರ್ಪಡಿಸಿ ಪಟ್ಟಣ ಸಹಕಾರ ಬ್ಯಾಂಕುಗಳ ಬೆಳವಣಿಗೆಗೆ ಶ್ರಮಿಸುತ್ತಿದೆ ಎಂದರು.

ಈ ತರಬೇತಿ ಶಿಬಿರದಲ್ಲಿ ಇತ್ತೀಚಿನ ಆರ್‌ಬಿಐ ಮಾರ್ಗಸೂಚಿಗಳು ಮತ್ತು ಎಫ್‌ಎಸ್‌ಡಬ್ಲ್ಯೂಎಮ್ ಮತ್ತು ಪಿ.ಸಿ.ಎ. ನಿಯಮಗಳು ರೇಟಿಂಗ್ ಕುರಿತು ಮಹಾಮಂಡಳದ ಬ್ಯಾಂಕಿಂಗ್ ಸಲಹೆಗಾರರಾದ ಶ್ರೀ ಸುಧಾಕರ ಭಟ್‌ರವರು, ತಂತ್ರಜ್ಞಾನ ಅಳವಡಿಕೆ – ಎನ್‌ಪಿಸಿಐ ಮತ್ತು ಅದರ ಉತ್ಪನ್ನಗಳ ಪಾತ್ರ ಹಾಗೂ ವಂಚನೆ ಮತ್ತು ದುರುಪಯೋಗ ತಡೆಗಟ್ಟುವ ಕ್ರಮಗಳ ಕುರಿತು ಬ್ಯಾಂಕಿಂಗ್ ತಜ್ಞರಾದ ಶ್ರೀ ಎಸ್.ಜಿ. ಕುಲಕರ್ಣಿರವರು ಉಪನ್ಯಾಸ ನೀಡಿದರು.

ಪ್ರಾರಂಭದಲ್ಲಿ ತರಬೇತಿ ಶಿಬಿರಕ್ಕೆ ಆಗಮಿಸಿದ್ದ ಪಟ್ಟಣ ಸಹಕಾರ ಬ್ಯಾಂಕುಗಳ ಪ್ರತಿನಿಧಿಗಳನ್ನು ಹಾಗೂ ಗಣ್ಯರನ್ನು ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಪುಂಡಲೀಕ ಎನ್. ಕೇರೂರೆಯವರು ಸ್ವಾಗತಿಸಿ, ಕೊನೆಯಲ್ಲಿ ವಂದನಾರ್ಪಣೆ ಸಲ್ಲಿಸಿದರು.ಈ ತರಬೇತಿ ಶಿಬಿರದಲ್ಲಿ ಮಹಾಮಂಡಳದ ಶಿಕ್ಷಣ ನಿಧಿ ಸಲಹಾ ಸಮಿತಿ ಸದಸ್ಯರಾದ ಶ್ರೀ ಶರಣಪ್ಪ ಎಸ್. ವಾರದ, ಮಹಾಮಂಡಳದ ಮಾಜಿ ನಿರ್ದೇಶಕರಾದ ಶ್ರೀ ಅರವಿಂದ ಹೂಗಾರ ಉಪ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಅನಿಲ ಎಚ್. ಕಿರೇಸೂರ ಉಪಸ್ಥಿತರಿದ್ದರು. ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳಿಂದ ಸುಮಾರು 170ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿ, ತರಬೇತಿ ಶಿಬಿರದ ಸದುಪಯೋಗವನ್ನು ಪಡೆದುಕೊಂಡರು.



## ಎಂಎಸ್‌ಎಂಇ ವಲಯದ ಉದ್ಯಮಗಳಿಗೆ ಸಾಲ ನೀಡಿಕೆ ಹೆಚ್ಚಿಸಲು ನಿರ್ಮಲಾ ಕರೆ

**ನವದೆಹಲಿ:** ಸಾಲ ನೀಡುವಿಕೆಯನ್ನು ಹೆಚ್ಚು ಮಾಡಬೇಕು, ಅದರಲ್ಲೂ ಮುಖ್ಯವಾಗಿ ಎಂಎಸ್‌ಎಂಇ ವಲಯದ ಉದ್ಯಮಗಳಿಗೆ ಸಾಲ ನೀಡುವಿಕೆ ಹೆಚ್ಚಬೇಕು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸರ್ಕಾರಿ ಸ್ವಾಮ್ಯದ ಬ್ಯಾಂಕುಗಳಿಗೆ ಹೇಳಿದರು. ಬ್ಯಾಂಕುಗಳು ಗ್ರಾಹಕರಿಗೆ ಒದಗಿಸುವ ಸೇವೆಗಳನ್ನು ಉತ್ತಮಪಡಿಸುವ ಬಗ್ಗೆಯೂ ಗಮನಹರಿಸಬೇಕು ಎಂದು ಅವರು ತಾಕೀತು ಮಾಡಿದರು.

ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳ ಸಾಲ ಪಡೆಯುವ ಅರ್ಹತೆಯನ್ನು ನಿರ್ಣಯಿಸಲು ಹೊಸದಾಗಿ ಜಾರಿಗೆ ತಂದಿರುವ ಮಾದರಿಯ ಅನುಷ್ಠಾನಕ್ಕೆ ಬಲ ತುಂಬಬೇಕು, ಈ ಮೂಲಕ ಎಂಎಸ್‌ಎಂಇ ವಲಯದ ಉದ್ದಿಮೆಗಳಿಗೆ ಸಾಲ ತ್ವರಿತವಾಗಿ ಸಿಗುವಂತೆ ಆಗಬೇಕು ಎಂದು ಅವರು ಪರಿಶೀಲನಾ ಸಭೆಯೊಂದರಲ್ಲಿ ಸರ್ಕಾರಿ ಸ್ವಾಮ್ಯದ ಬ್ಯಾಂಕುಗಳಿಗೆ ಸೂಚಿಸಿದರು.

ಹೊಸ ಮಾದರಿಯನ್ನು ಈ ವರ್ಷದ ಮಾರ್ಚ್ ತಿಂಗಳಲ್ಲಿ ಆರಂಭಿಸಲಾಗಿದೆ.



ಇದರ ಅಡಿಯಲ್ಲಿ, ಎಂಎಸ್‌ಎಂಇ ವಲಯದ ಉದ್ದಿಮೆಗಳು ಸಾಲ ಪಡೆಯಲು ಎಷ್ಟು ಅರ್ಹ ಎಂಬುದನ್ನು ನಿರ್ಣಯಿಸಲು ಬ್ಯಾಂಕುಗಳು ಹೊರಗಿನ ಸಂಸ್ಥೆಗಳನ್ನು ನೆಚ್ಚಿಕೊಳ್ಳುವ ಬದಲು ತಮ್ಮದೇ ಆದ ವ್ಯವಸ್ಥೆಯೊಂದನ್ನು ರೂಪಿಸಿಕೊಳ್ಳಬೇಕಾಗುತ್ತದೆ. ಹೊಸ ಮಾದರಿಯ ಮೂಲಕ 1.97 ಲಕ್ಷ ಎಂಎಸ್‌ಎಂಇ ಸಾಲ ನೀಡಲಾಗಿದೆ, ಇದರ ಮೊತ್ತ ಒಟ್ಟು ರೂ. 60 ಸಾವಿರ ಕೋಟಿ ಎಂದು ಹಣಕಾಸು ಸಚಿವಾಲಯದ ಪ್ರಕಟಣೆ ತಿಳಿಸಿದೆ.

## ತುಮಕೂರು ವೀರಶೈವ ಸಹಕಾರ ಬ್ಯಾಂಕ್ ವತಿಯಿಂದ ಮುಖ್ಯಮಂತ್ರಿಗಳಿಗೆ ಗೌರವ ಸಲ್ಲಿಕೆ






ತುಮಕೂರು: ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರು ದಿನಾಂಕ: 21.06.2025 ರಂದು ಸಹಕಾರ ಸಚಿವರಾದ ಶ್ರೀ ಕೆ.ಎನ್. ರಾಜಣ್ಣನವರ ಹುಟ್ಟುಹಬ್ಬದ ಕಾರ್ಯಕ್ರಮಕ್ಕೆ ಆಗಮಿಸಿದಾಗ ತುಮಕೂರು ವೀರಶೈವ ಸಹಕಾರ ಬ್ಯಾಂಕಿನ ವತಿಯಿಂದ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಮಂತ್ರಿಗಳಾದ ಎಸ್. ಶಿವಣ್ಣನವರು, ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಕೆ.ಜೆ.ರುದ್ರಪ್ಪನವರು ಉಪಾಧ್ಯಕ್ಷರಾದ ಕೆ. ಮಲ್ಲಿಕಾರ್ಜುನಯ್ಯನವರು ಹಾಗೂ ಬ್ಯಾಂಕಿನ ನಿರ್ದೇಶಕ ಮಂಡಳಿಯವರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ದಿನಾಂಕ 21/06/2025 ರಂದು ನಡೆದ ಮಾನ್ಯ ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ನವರ 75ನೇ ಜನ್ಮದಿನದ ಅಮೃತ ಮಹೋತ್ಸವದ ಕಾರ್ಯಕ್ರಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮಲ್ಲೇಶ್ವರಂ ಕೋ-ಆಪರೇಟಿವ್ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಸುರೇಶ್ ಎನ್.ಎಂ, ಮಾಜಿ ಅಧ್ಯಕ್ಷರಾದ ಶ್ರೀ ಎ.ಆರ್. ಅನಂತನ್, ಕನ್ನಡಪರ ಹೋರಾಟಗಾರರು, ಡಾ|| ರಾಜಕುಮಾರ್ ಸಂಘದ ಅಧ್ಯಕ್ಷರು ಹಾಗೂ ಕರ್ನಾಟಕ ಫಿಲಂ ಚೇಂಬರ್‌ನ ಮಾಜಿ ಅಧ್ಯಕ್ಷರಾದ ಸಾ. ರ. ಗೋವಿಂದುರವರು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷರಾದ ನರಸಿಂಹಲು, ನಿರ್ಮಾಪಕರುಗಳಾದ ಶಿಲ್ಪ ಶ್ರೀನಿವಾಸ್, ಪ್ರವೀಣ್ ಹಾಗೂ ಇತರರು ತುಮಕೂರು ವೀರಶೈವ ಸಹಕಾರ ಬ್ಯಾಂಕಿಗೆ ಭೇಟಿ ನೀಡಿದ್ದರು, ಈ ಸಂದರ್ಭದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ಕೆ. ಜೆ. ರುದ್ರಪ್ಪನವರು, ಉಪಾಧ್ಯಕ್ಷರಾದ ಶ್ರೀ ಕೆ. ಮಲ್ಲಿಕಾರ್ಜುನಯ್ಯನವರು, ನಿರ್ದೇಶಕ ಮಂಡಳಿಯವರು ಹಾಗೂ ಇತರರು ಉಪಸ್ಥಿತರಿದ್ದರು.

## ಶ್ರೀ ಕಾಡಸಿದ್ದೇಶ್ವರ ಪಟ್ಟಣ ಸಹಕಾರಿ ಬ್ಯಾಂಕಿಗೆ ಬ್ಯಾಂಕೊ ಬ್ಲೂ ರಿಬ್ಬನ್ 2024 ಪ್ರಶಸ್ತಿ

AVIES PUBLICATIONS KOLHAPURದವರು ಕೊಡಮಾಡುವ ಬ್ಯಾಂಕೊ ಬ್ಲ್ಯೂ ರಿಬ್ಬನ್-2024ರ ಪ್ರಶಸ್ತಿಗೆ, ರೂ 60 ರಿಂದ 70 ಕೋಟಿ ಠೇವಣಿಗಳ ಅಡಿಯಲ್ಲಿ ಶ್ರೀ ಕಾಡಸಿದ್ದೇಶ್ವರ ಪಟ್ಟಣ ಸಹಕಾರಿ ಬ್ಯಾಂಕಿಗೆ "ಉತ್ತಮ ಸಹಕಾರಿ ಬ್ಯಾಂಕು" ಪ್ರಶಸ್ತಿಯನ್ನು ಪಡೆಯಲಾಗಿದೆ ಎಂದು ತಿಳಿಸಲು ನಮಗೆ ತುಂಬ ಹೆಮ್ಮೆ ಎನಿಸುತ್ತಿದೆ.



ಈ ಸಂದರ್ಭದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಸುರೇಶ ಆಯ್. ಅಬಕಾರ, ಉಪಾಧ್ಯಕ್ಷರಾದ ಶ್ರೀ ಮಲ್ಲಿನಾಥ ಎಸ್. ಕಕಮರಿ, ಬ್ಯಾಂಕಿನ ನಿರ್ದೇಶಕ ಮಂಡಳಿ ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದು ಟ್ರೋಫಿಯೊಂದಿಗೆ ಬ್ಯಾಂಕಿನ ಸಭಾಭವನದಲ್ಲಿ ಹರ್ಷ ವ್ಯಕ್ತಪಡಿಸಿದರು. ಬ್ಯಾಂಕಿನ ಅಧ್ಯಕ್ಷರು ಮಾತನಾಡಿ ಭಾರತೀಯ ರಿಜರ್ವ ಬ್ಯಾಂಕಿನ ಮಾರ್ಗದರ್ಶನದಂತೆ ವ್ಯವಹಾರವನ್ನು ನಿರ್ವಹಿಸಲು ಸೂಕ್ತ ಸಲಹೆಗಳನ್ನು ಹಾಗೂ ಹೊಸ ಹೊಸ ಅವಿಷ್ಕಾರಗಳನ್ನು ಅಳವಡಿಸಿಕೊಂಡು ಬ್ಯಾಂಕುಗಳು ತಮ್ಮದೇ ಆದ ಸಂಪನ್ಮೂಲಗಳನ್ನು ಕ್ರೋಢಿಕರಿಸಿ ಅವುಗಳ ಆದಾಯದ ಮಟ್ಟವನ್ನು ಹೆಚ್ಚಿಸಬೇಕೆಂದು ಮನವಿ ಮಾಡಿದರು. ಅದೇ ರೀತಿಯಾಗಿ ಬ್ಯಾಂಕಿನ ಹಿರಿಯ ನಿರ್ದೇಶಕರಾದ ಶ್ರೀ ಶಂಕರಲಿಂಗಪ್ಪ ಎಂ.ಜುಂಜಪ್ಪನವರ ಮಾತನಾಡಿ ಹೆಚ್ಚಿನ ದುಡಿಯುವ ಬಂಡವಾಳವನ್ನು ಸಂಗ್ರಹಿಸಲು ಹೊಸದಾಗಿ ಯೋಜನೆಗಳನ್ನು ರೂಪಿಸಬೇಕೆಂದು ತಿಳಿಸಿದರು.

## ಶ್ರೀ ಲಕ್ಷ್ಮೀ ಮಹಿಳಾ ಸಹಕಾರ ಬ್ಯಾಂಕ್ : 31ನೇ ವಾರ್ಷಿಕ ಮಹಾಸಭೆ





**ಬೆಂಗಳೂರು:** ಶ್ರೀ ಲಕ್ಷ್ಮೀ ಮಹಿಳಾ ಸಹಕಾರ ಬ್ಯಾಂಕಿನ 31ನೇ ವಾರ್ಷಿಕ ಮಹಾಸಭೆಯು ದಿನಾಂಕ:22.06.2025ರಂದು ಬೆಂಗಳೂರಿನ ಭವಾನಿ ಕಲ್ಯಾಣ ಮಂಟಪದಲ್ಲಿ ಬ್ಯಾಂಕಿನ ಅಧ್ಯಕ್ಷರಾದ ಡಾ. ವಾಸವಿ ರಂಗಧಾಮ್, ಉಪಾಧ್ಯಕ್ಷರಾದ ಶ್ರೀಮತಿ ನಿರ್ಮಲ ಎ, ಶ್ರೀಮತಿ ಅಂಜಲಿ ಆರ್, ಶ್ರೀಮತಿ ಪವಿತ್ರಾ ಶ್ರೀನಾಥ್, ಶ್ರೀಮತಿ ವಿಜಯಲಕ್ಷ್ಮೀ ಜಿ, ಶ್ರೀಮತಿ ಲಕ್ಷ್ಮೀ ಕೆ.ಹೆಚ್, ಡಾ: ಸುಬ್ಬಲಕ್ಷ್ಮೀ ಬಿ.ಎಸ್, ಶ್ರೀಮತಿ ವಿಜಯ ಜಿ ಅಗಡಿ, ಶ್ರೀಮತಿ ವಿದ್ಯಾ ವಿನಾಯ್ ಸರ್ವೋತ್ತಮ್, ಶ್ರೀಮತಿ ಸಂಧ್ಯಾ ಹೆಚ್, ಶ್ರೀ ಮಂಜುನಾಥ್ ಆರ್.ಎಸ್ ಮತ್ತು ಮುಖ್ಯಕಾರ್ಯ ನಿರ್ವಹಣಾಧಿಕಾರಿಯಾದ ಶ್ರೀ ಗೋವಿಂದಯ್ಯ ಟಿ. ರವರುಗಳಿಂದ ಜರುಗಿದ್ದು, ಮಹಾಸಭೆಯಲ್ಲಿ ಬ್ಯಾಂಕಿನ ಹಿರಿಯ ನಾಗರೀಕ ಸದಸ್ಯರಿಗೆ, ಠೇವುದಾರರಿಗೆ, ಸಾಲದ ಕಂತುಗಳನ್ನು ಕ್ರಮವಾಗಿ ಪಾವತಿ ಮಾಡಿರುವ ಸದಸ್ಯರಿಗೆ, ಸದಸ್ಯರ ಮಕ್ಕಳಿಗೆ ಮತ್ತು ಬ್ಯಾಂಕಿನ ಸಿಬ್ಬಂದಿಯವರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮತ್ತು ಬ್ಯಾಂಕಿನ ಕಾನೂನು ಸಲಹೆಗಾರರಿಗೆ ಸನ್ಮಾನ ಕಾರ್ಯಕ್ರಮವನ್ನು ಸಹ ಹಮ್ಮಿಕೊಳ್ಳಲಾಗಿರುತ್ತದೆ. ಹಾಗೆಯೇ ಈ ವರ್ಷ ಬ್ಯಾಂಕಿನ ಸದಸ್ಯರಿಗೆ ಶೇ.14ರಷ್ಟು ಡಿವಿಡೆಂಡನ್ನು ಸಹ ನೀಡಲಾಗಿರುತ್ತದೆ.





## ಸಹಕಾರ ಶಿಕ್ಷಣ ನಿಧಿ ಸಲ್ಲಿಕೆ



ಶ್ರೀ ಲಕ್ಷ್ಮೀ ಮಹಿಳಾ ಸಹಕಾರ ಬ್ಯಾಂಕಿನ ಸಹಕಾರ ಶಿಕ್ಷಣ ನಿಧಿ ಚೆಕ್‌ನ್ನು ಬ್ಯಾಂಕಿನ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಗೋವಿಂದಯ್ಯ ಟಿ. ರವರು ಮಹಾಮಂಡಳದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಪುಂಡಲೀಕ ಎನ್. ಕೇರೂರೆಯವರಿಗೆ ಸಲ್ಲಿಸಿದರು.

## ಪಟ್ಟಣ ಸಹಕಾರ ಬ್ಯಾಂಕುಗಳ ಗಮನಕ್ಕೆ

ಮಹಾಮಂಡಳವು "ವಾರಪತ್ರಿಕೆ" ಹಾಗೂ "ತ್ರೈಮಾಸಿಕ ಬ್ಯಾಂಕಿಂಗ್ ಪ್ರಪಂಚ ಪತ್ರಿಕೆ" ಎಂಬ ಎರಡು ಪತ್ರಿಕೆಗಳನ್ನು ಪಟ್ಟಣ ಸಹಕಾರ ಬ್ಯಾಂಕುಗಳಿಗೆ ಸಹಕಾರ ಕ್ಷೇತ್ರ, ಬ್ಯಾಂಕಿಂಗ್ ಕ್ಷೇತ್ರ ಹಾಗೂ ಇತರೆ ಉಪಯುಕ್ತ ಸುದ್ದಿ / ವಿಚಾರಗಳನ್ನು ಹಾಗೂ ಇತ್ತೀಚಿನ ದಿನಗಳಲ್ಲಿ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಬದಲಾವಣೆಗೊಳಪಡುವ ಸಹಕಾರಿ ಕಾನೂನು ವಿದ್ಯಮಾನಗಳ ಕುರಿತು ಪ್ರಶ್ನೋತ್ತರ, ವಿವಿಧ ಬ್ಯಾಂಕುಗಳ ಯಶೋಗಾಥೆ, ಪ್ರಗತಿ ಚಿತ್ರ, ಬ್ಯಾಂಕುಗಳಲ್ಲಿ ಜರುಗಿರುವ ವಿವಿಧ ಸಮಾರಂಭಗಳ ವಿವರಗಳನ್ನು ಪ್ರಕಟಿಸಲಾಗುತ್ತಿದೆ. ಪಟ್ಟಣ ಸಹಕಾರ ಬ್ಯಾಂಕುಗಳು ತಾವು ಏರ್ಪಡಿಸುವ ಕಾರ್ಯಕ್ರಮಗಳ ಫೋಟೋ (ಛಾಯಾಚಿತ್ರಗಳು) ಮತ್ತು ವರದಿಗಳು ಹಾಗೂ ಬ್ಯಾಂಕಿನ ಪ್ರಗತಿ ಚಿತ್ರದ ವರದಿಗಳನ್ನು ಕೂಡಲೇ ಮಹಾಮಂಡಳಕ್ಕೆ ಅಂಚೆ ಮೂಲಕ ಅಥವಾ ಇ-ಮೇಲ್ ವಿಳಾಸಕ್ಕೆ (email: editorkubf1@gmail.com ಅಥವಾ kscubfed@gmail.comಗೆ ಕಳುಹಿಸಿಕೊಟ್ಟಲ್ಲಿ ಮಹಾಮಂಡಳದ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದು.

# ಸುಸ್ಥಿರ ಆರ್ಥಿಕತೆಗೆ ಸಹಕಾರ ಕ್ಷೇತ್ರವೇ ಆಧಾರ

ಡಾ. ಎಂ.ಆರ್.ವೆಂಕಟೇಶ್, ಅಧ್ಯಕ್ಷರು, ಶ್ರೀ ತ್ಯಾಗರಾಜ ಕೋ–ಆಪರೇಟಿವ್ ಬ್ಯಾಂಕ್ ಲಿ., ಬೆಂಗಳೂರು

ಯಾವುದೇ ದೇಶವು ಆರ್ಥಿಕವಾಗಿ ಸಬಲವಾಗುವುದು ಬಹಳ ಅವಶ್ಯಕ ಅಂಶ. ಆರ್ಥಿಕತೆ ಎನ್ನುವುದು ಜಿಡಿಪಿಯಲ್ಲಿ ವಿದೇಶಿ ಹೂಡಿಕೆಯಲ್ಲಿದ್ದರೆ ಅದನ್ನು ನಿಜವಾದ ಅಭಿವೃದ್ಧಿ ಎನ್ನಲಾಗದು. ಅನೇಕ ಬಾರಿ ಜಿಡಿಪಿ ಹೆಚ್ಚಳವಾಗಿದ್ದರೂ ಆ ದೇಶದ ಜನರ ತಲಾದಾಯ, ಬಡವ–ಶ್ರೀಮಂತರ ನಡುವಿನ ವ್ಯತ್ಯಾಸವು ಸಮಾಧಾನಕರವಾಗಿರುವುದಿಲ್ಲ. ಹಾಗಾಗಿ, ಜಿಡಿಪಿ ಹೆಚ್ಚಳ, ಆರ್ಥಿಕ ಬಲವರ್ಧನೆಯು ಕೇವಲ ಅಂಕಿ ಸಂಖ್ಯೆಯಾಗಿರದೆ, ದೇಶದ ಎಲ್ಲ ವರ್ಗ ಸಮುದಾಯ, ಸ್ತರಗಳ ಜನರನ್ನೂ ಒಳಗೊಂಡಿದ್ದರೆ ಮಾತ್ರ ನಿಜವಾದ ಏಳಿಗೆ ಆಗುತ್ತದೆ. ಭಾರತದಂತಹ, ಜನಸಂಖ್ಯಾ ಪ್ರಧಾನ ದೇಶಗಳಲ್ಲಿ ಹೆಚ್ಚೆಚ್ಚು ಜನರನ್ನು ಆರ್ಥಿಕ ಚಟುವಟಿಕೆಯಲ್ಲಿ ತೊಡಗಿಸುವಂತೆ ಮಾಡುವುದೇ ಬಹಳ ಮುಖ್ಯವಾದ ಹಾಗೂ ಸವಾಲಿನ ಸಂಗತಿ. ಈ ನಿಟ್ಟಿನಲ್ಲಿ ಸೂಕ್ಷ್ಮ, ಸಣ್ಣ ಕೈಗಾರಿಕೆಗಳು, ಗುಡಿ ಕೈಗಾರಿಕೆಗಳು ಹೆಚ್ಚಿನ ಜನರನ್ನು ಒಳಗೊಳ್ಳುತ್ತವೆ. ಅದೆಲ್ಲಕ್ಕಿಂತ ಮುಖ್ಯವಾಗಿ ಹಾಗೂ ಅವೆಲ್ಲವನ್ನೂ ಒಳಗೊಂಡಂತೆ ದೇಶದ ಆರ್ಥಿಕ–ಸಾಮಾಜಿಕ ಅಭಿವೃದ್ಧಿಗೆ ಕೊಡುಗೆ ನೀಡಬಹುದಾದ ಕ್ಷೇತ್ರವೆಂದರೆ ಸಹಕಾರ ಕ್ಷೇತ್ರ.




ಭಾರತದ ಆರ್ಥಿಕತೆಯಲ್ಲಿ ಸಹಕಾರ ಸಂಸ್ಥೆಗಳ ಮಹತ್ವವನ್ನು ಅರಿತ ಈಗಿನ ಕೇಂದ್ರ ಸರಕಾರ 2021ರಲ್ಲಿ ಪ್ರತ್ಯೇಕ ಸಹಕಾರ ಸಚಿವಾಲಯವನ್ನು ಸ್ಥಾಪಿಸಿತು. ಈ ಹಿಂದೆ ಕೃಷಿ ಸಚಿವಾಲಯದ ಒಂದು ವಿಭಾಗವಾಗಿ, ನುರಿತ ಪರಿಣಿತರಿಲ್ಲದೆ ಸಹಕಾರ ಕ್ಷೇತ್ರ ಕಾರ್ಯನಿರ್ವಹಿಸುತ್ತಿತ್ತು. ಪ್ರತ್ಯೇಕ ಸಹಕಾರ ಸಚಿವಾಲಯ ಸ್ಥಾಪನೆಯಾದ ನಂತರ ಇಡೀ ಸಹಕಾರ ಕ್ಷೇತ್ರದ ಪ್ರಗತಿಗಾಗಿ ದೃಢವಾದ ಆಡಳಿತಾತ್ಮಕ ಕಾನೂನು ಮತ್ತು ನೀತಿ ಚೌಕಟ್ಟುಗಳನ್ನು ರಚಿಸಲಾಗಿದೆ.

'ಆಡು ಮುಟ್ಟದ ಸೊಪ್ಪಿಲ್ಲ' ಎನ್ನುವ ನಾಣ್ಣುಡಿಯಂತೆ ಸಹಕಾರ ಕ್ಷೇತ್ರವೂ ಸಹ ಸರ್ವವ್ಯಾಪಿ –ಸರ್ವ ಸ್ಪರ್ಶಿ. ದೇಶದಲ್ಲಿ 8.5 ಲಕ್ಷಕ್ಕೂ ಅಧಿಕ ನೋಂದಾಯಿತ ವಿವಿಧ ಸಹಕಾರಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಿಂದ ಸುಮಾರು 29 ಕೋಟಿಗೂ ಅಧಿಕ ಸದಸ್ಯರು ಸಹಕಾರ ಕ್ಷೇತ್ರದ ವಿವಿಧ ವಲಯಗಳಲ್ಲಿ ತೊಡಗಿಸಿಕೊಂಡಿದ್ದಾರೆ.

ಸಹಕಾರ ಸಚಿವಾಲಯವು ಕಳೆದ ನಾಲ್ಕು ವರ್ಷಗಳಲ್ಲಿ 60 ಮಹತ್ವದ ಉಪಕ್ರಮಗಳನ್ನು ಪ್ರಾರಂಭಿಸಿದೆ. ಈ ಉಪಕ್ರಮಗಳು ಭಾರತದ 8.5 ಲಕ್ಷ ವಿವಿಧ ಸಹಕಾರ ಸಂಘಗಳನ್ನು ಗ್ರಾಮೀಣ ಮತ್ತು ರಾಷ್ಟ್ರೀಯ ಬೆಳವಣಿಗೆಯ ಎಂಜಿನ್‌ಗಳನ್ನಾಗಿ ಪರಿವರ್ತಿಸುವ ಗುರಿಯನ್ನು ಹೊಂದಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಗೃಹ ಮತ್ತು ಸಹಕಾರ ಸಚಿವರಾದ ಅಮಿತ್ ಶಾ ಅವರ ಸಮರ್ಥ ನೇತೃತ್ವದಲ್ಲಿ ಮುಂಬರುವ ದಿನಗಳಲ್ಲಿ ಕೃಷಿ ಮತ್ತು ಗ್ರಾಮೀಣ ಪ್ರದೇಶಗಳಿಗೆ ಉದ್ಯೋಗ ಮತ್ತು ಸಮೃದ್ಧಿಗೆ ಸಹಕಾರ ಸಚಿವಾಲಯ ದಾರಿ ಮಾಡಿಕೊಡಲಿದೆ.

ಸಹಕಾರ ವಲಯವು ಸಾಮಾಜಿಕ ಸಾಮರಸ್ಯ, ಸಮಾನತೆ ಮತ್ತು ಎಲ್ಲರನ್ನೂ ಒಳಗೊಳ್ಳುವ ತತ್ವಗಳ ಮೇಲೆ ಮುನ್ನಡೆಯುತ್ತಿದೆ. ವಿಶ್ವದ 3ನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗುವುದು ಮತ್ತು 2047ರ ವೇಳೆಗೆ ಸಂಪೂರ್ಣವಾಗಿ ಅಭಿವೃದ್ಧಿಹೊಂದಿದ ರಾಷ್ಟ್ರವಾಗಿ ಪರಿವರ್ತನೆಗೊಳಿಸುವುದರೊಂದಿಗೆ ರಾಷ್ಟ್ರದ ಅಭಿವೃದ್ಧಿಗೆ ಒಂದು ಲಕ್ಷ ಟ್ರಿಲಿಯನ್ ಕೊಡುಗೆಯನ್ನು ಸಹಕಾರ ಕ್ಷೇತ್ರ ನೀಡಲಿದೆ.

ಸಹಕಾರದ ಕುರಿತು ಉನ್ನತ ಅಧ್ಯಯನ ಸಂಶೋಧನೆ ಜತೆಗೆ ವೃತ್ತಿಪರ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ತರಬೇತಿಯ ಅವಶ್ಯಕತೆಯಿತ್ತು. ಅದಕ್ಕೆ ಸಹಕಾರಿ ವಿಶ್ವವಿದ್ಯಾಲಯ ಒಂದನ್ನು ಸ್ಥಾಪಿಸಿ ಈ ಮೂಲಕ ಸಹಕಾರ ಕ್ಷೇತ್ರದ ವಿವಿಧ ವಲಯಗಳಿಗೆ ನುರಿತ ವೃತ್ತಿಪರರನ್ನು ನೀಡುವಲ್ಲಿ ಪ್ರಮುಖ ಪಾತ್ರ ವಹಿಸುವ ಆಶಾಭಾವನೆಯಿದೆ.

ಕಳೆದ ಐದು ವರ್ಷಗಳಲ್ಲಿ ಸಹಕಾರಿ ಸಂಘಗಳ ಅಭಿವೃದ್ಧಿಗಾಗಿ ಕೇಂದ್ರ ಸರಕಾರ ಒಟ್ಟು 3,78,544.60ಲಕ್ಷ ಕೋಟಿ ರೂ. ಹಂಚಿಕೆ ಮಾಡಿದೆ. ಈ ಹಣವನ್ನು ಕೃಷಿ, ಡೇರಿ, ಮೀನುಗಾರಿಕೆಯಂತಹ ವಿವಿಧ ಕ್ಷೇತ್ರಗಳ ಮೂಲಸೌಕರ್ಯಗಳ ಅಭಿವೃದ್ಧಿ, ಕೌಶಲ ಅಭಿವೃದ್ಧಿ ಮತ್ತು ಸಾಮರ್ಥ್ಯ ವೃದ್ಧಿ ಸೇರಿದಂತೆ ವಿವಿಧ ಉಪಕ್ರಮಗಳಿಗೆ ಬಳಸಿಕೊಳ್ಳಲಾಗಿದೆ.

ದೇಶದ ಆರ್ಥಿಕತೆಯನ್ನು 11ನೇ ಸ್ಥಾನದಿಂದ 5ನೇ ಸ್ಥಾನಕ್ಕೆ ಏರಿಸಲು ಸಹಕಾರ ಕ್ಷೇತ್ರದ ಬಹುದೊಡ್ಡ ಕೊಡುಗೆಯಿದೆ. ದೇಶದಲ್ಲಿರುವ ಸುಮಾರು 6.50 ಲಕ್ಷ ಹಳ್ಳಿಗಳಲ್ಲಿರುವ ನೈಸರ್ಗಿಕ ಸಂಪನ್ಮೂಲಗಳನ್ನು ಸುಸ್ಥಿರ ರೀತಿಯಲ್ಲಿ ಬಳಸಿಕೊಳ್ಳಲು ಸಹಕಾರ ಕ್ಷೇತ್ರ ಹಲವಾರು ಅವಕಾಶಗಳಿಗೆ ದಾರಿ ಮಾಡಿಕೊಡುತ್ತದೆ. ಭಾರತದ ಜಿಡಿಪಿಗೆ ಶೇ.10ಕ್ಕೂ ಹೆಚ್ಚು ಕೊಡುಗೆಯನ್ನು ನೀಡುವ ಸಾಮರ್ಥ್ಯವಿರುವ ಸಹಕಾರ ಕ್ಷೇತ್ರ ಇಡೀ ದೇಶದಲ್ಲಿ 2030ರ ವೇಳೆಗೆ 5.5ಕೋಟಿ ನೇರ ಉದ್ಯೋಗಗಳನ್ನು ಮತ್ತು 5.6 ಕೋಟಿ ಸ್ವಉದ್ಯೋಗ ಸೃಷ್ಟಿಸುವ ಸಾಧ್ಯತೆ ಇದೆಯೆಂದು ಅಂದಾಜಿಸಲಾಗಿದೆ.

ಸಹಕಾರಿ ಬ್ಯಾಂಕುಗಳ ಬೆಳವಣಿಗೆಯಲ್ಲಿ ಮಹತ್ತರ ಪಾತ್ರ ವಹಿಸಿರುವ RBIನ ಕೆಲವೊಂದು ನಿಯಮಗಳನ್ನು ಸರಳಗೊಳಿಸಿ, ಈಗ ಅಸ್ತಿತ್ವಕ್ಕೆ ಬರುತ್ತಿರುವ ರಾಷ್ಟ್ರೀಯ ನಗರ ಸಹಕಾರಿ ಹಣಕಾಸು ಮತ್ತು ಅಭಿವೃದ್ಧಿ ಕಾರ್ಪೊರೇಷನ್ (NUCFDC) ಮುಖೇನ ಸಹಕಾರ ಬ್ಯಾಂಕುಗಳ ಸಮಗ್ರ ಬದಲಾವಣೆಗೆ ನೆರವನ್ನು ನೀಡುವುದರಿಂದ ಭಾರತೀಯ ಬ್ಯಾಂಕಿಂಗ್ ವಲಯದ ಬೆನ್ನೆಲುಬಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರವು 11 ವರ್ಷಗಳನ್ನು, ಎರಡನೇ ಅವಧಿಯಲ್ಲಿ ಒಂದು ವರ್ಷ ಪೂರೈಸಿ ಎರಡನೇ ವರ್ಷಕ್ಕೆ ಕಾಲಿಟ್ಟಿದೆ. ಈ ಸಂದರ್ಭದಲ್ಲಿ ದೇಶದ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಕೇಂದ್ರ ಸರಕಾರ ತೆಗೆದುಕೊಳ್ಳುತ್ತಿರುವ ನಿಲುವುಗಳು ಪ್ರಶಂಸನೀಯವಾಗಿವೆ. ಹಾಗೆಯೇ ಸಹಕಾರ ಕ್ಷೇತ್ರವನ್ನು ದೇಶದ ಉನ್ನತಿಯ ಭಾಗವಾಗಿಸಿಕೊಳ್ಳುವ ಸರ್ವ ಪ್ರಯತ್ನಗಳೂ ನಡೆಯುತ್ತಿವೆ ಎನ್ನುವುದು ಸಮಾಧಾನದ ಸಂಗತಿ.

# ನಿಮ್ಮ ಪ್ರಶ್ನೆ ನಮ್ಮ ಉತ್ತರ






▸▸ **ಸುಧಾಕರ್ ಭಟ್,** ಬ್ಯಾಂಕಿಂಗ್ ಸಲಹೆಗಾರರು.

**01. ನಮ್ಮ ಬ್ಯಾಂಕಿನಲ್ಲಿ ಬೋರ್ಡ್ ಆಫ್ ಮ್ಯಾನೇಜ್‌ಮೆಂಟಿನ ಸದಸ್ಯರನ್ನು ಆಯ್ಕೆ ಮಾಡಬೇಕಾಗಿದೆ. ಬಿ.ಒ.ಎಂ.ಸದಸ್ಯರನ್ನು ಆಯ್ಕೆ ಮಾಡುವ ಮಂಡಳಿಯ ಸಭೆಯಲ್ಲಿ ವೃತ್ತಿಪರ ನಿರ್ದೇಶಕರು ಭಾಗವಹಿಸಿ ಆಯ್ಕೆಯಲ್ಲಿ ಮತದಾನ ಮಾಡಬಹುದೇ?**

**– ಪಟ್ಟಣ ಸಹಕಾರ ಬ್ಯಾಂಕ್ ಲಿ., ಬೆಳಗಾವಿ ಜಿಲ್ಲೆ.**

ಉತ್ತರ: ಭಾರತೀಯ ರಿಜರ್ವ್ ಬ್ಯಾಂಕಿನ ದೃಷ್ಟಿಯಲ್ಲಿ ಚುನಾಯಿತ ನಿರ್ದೇಶಕರು ಮತ್ತು ವೃತ್ತಿಪರ ನಿರ್ದೇಶಕರ ನಡುವೆ ಯಾವುದೇ ವ್ಯತ್ಯಾಸವಿಲ್ಲ. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಕಲಂ 28 ಏ(3)(4–ಏ) ರೀತ್ಯ ವೃತ್ತಿಪರ ನಿರ್ದೇಶಕರು ಕೇವಲ ಮಂಡಳಿಯ ಸಭೆಯ ಕೋರಂಗೆ ಲೆಕ್ಕಹಾಕುವಂತಿಲ್ಲ ಮತ್ತು ಬ್ಯಾಂಕಿನ ಪದಾಧಿಕಾರಿಗಳ ಚುನಾವಣೆಯಲ್ಲಿ ಅವರು ಮತ ಚಲಾಯಿಸುವಂತಿಲ್ಲ. ಆದ್ದರಿಂದ ವೃತ್ತಿಪರ ನಿರ್ದೇಶಕರು ಬೋರ್ಡ್ ಆಫ್ ಮ್ಯಾನೇಜ್‌ಮೆಂಟಿನ ಸದಸ್ಯರನ್ನು ಆಯ್ಕೆ ಮಾಡಲು ಕರೆಯಲಾದ ಮಂಡಳಿ ಸಭೆಯಲ್ಲಿ ಭಾಗವಹಿಸಿ ಮತ ಚಲಾಯಿಸಬಹುದು.

**02. ಒಬ್ಬ ಚಾರ್ಟರ್ಡ್ ಅಕೌಂಟೆಂಟರು ಎರಡು ಪಟ್ಟಣ ಸಹಕಾರ ಬ್ಯಾಂಕುಗಳಲ್ಲಿ ವೃತ್ತಿಪರ ನಿರ್ದೇಶಕರಾಗಿ ಆಯ್ಕೆಯಾಗಬಹುದೇ?**

**–ಪಟ್ಟಣ ಸಹಕಾರ ಬ್ಯಾಂಕ್ ಲಿ., ತುಮಕೂರು.**

ಉತ್ತರ: ವೃತ್ತಿಪರ ನಿರ್ದೇಶಕರು ಪಟ್ಟಣ ಸಹಕಾರ ಬ್ಯಾಂಕಿನಲ್ಲಿ ಸದಸ್ಯರಾಗಿರುವ ಅವಶ್ಯಕತೆಯಿಲ್ಲ. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆಯ ಕಲಂ 28–ಏ(4–ಏ) ಮತ್ತು ಭಾರತೀಯ ರಿಜರ್ವ್ ಬ್ಯಾಂಕಿನ ಮಾರ್ಗಸೂಚಿ ಒಬ್ಬ ವ್ಯಕ್ತಿ ಎರಡು ಪಟ್ಟಣ ಸಹಕಾರ ಬ್ಯಾಂಕುಗಳಲ್ಲಿ ವೃತ್ತಿಪರ ನಿರ್ದೇಶಕರಾಗಿ ನೇಮಕಗೊಳ್ಳುವಲ್ಲಿ ಪ್ರತಿಬಂಧ ಹೇರಿಲ್ಲ. ಭಾರತೀಯ ರಿಜರ್ವ್ ಬ್ಯಾಂಕಿನ ಮಾರ್ಗಸೂಚಿಯಂತೆ ಪಟ್ಟಣ ಸಹಕಾರ ಬ್ಯಾಂಕುಗಳ ಕಾರ್ಯಾಚರಣೆಯ ಪ್ರದೇಶ ಬೇರೆಯಾಗಿದ್ದರೆ ಒಬ್ಬ ವ್ಯಕ್ತಿ ಮೂರು ಪಟ್ಟಣ ಸಹಕಾರ ಬ್ಯಾಂಕುಗಳಲ್ಲಿ ಬೋರ್ಡ್ ಆಫ್ ಮ್ಯಾನೇಜ್‌ಮೆಂಟಿನ ಸದಸ್ಯರಾಗಬಹುದು. ಮೇಲಿನ ಮಾರ್ಗಸೂಚಿಯನ್ನು ಗಮನದಲ್ಲಿಟ್ಟುಕೊಂಡು ನೀವು ನಿಮ್ಮ ವೃತ್ತಿಪರ ನಿರ್ದೇಶಕರನ್ನು ಆಯ್ಕೆ ಮಾಡಬಹುದು.

# ಎಮ್.ಸಿ.ಸಿ. ಬ್ಯಾಂಕಿನಿಂದ ನೋಟ್ ಪುಸ್ತಕ, ಕೊಡೆ ಮತ್ತು ಸ್ಕೂಲ್ ಬ್ಯಾಗ್ ವಿತರಣೆ





**ಮಂಗಳೂರು:** ಸಾಮಾಜಿಕ ಜವಾಬ್ದಾರಿ ಮತ್ತು ಸಮುದಾಯ ಅಭಿವೃದ್ಧಿಯತ್ತ ತನ್ನ ಅಚಲ ಬದ್ಧತೆಯ ಭಾಗವಾಗಿ, ಎಂಸಿಸಿ ಬ್ಯಾಂಕ್ 2025 ಜೂನ್ ತಿಂಗಳಲ್ಲಿ ಮಂಗಳೂರು, ಉಡುಪಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಾದ್ಯಂತ ವಿವಿಧ ಶಾಲೆಗಳು, ಅನಾಥಾಶ್ರಮಗಳು ಮತ್ತು ಸಂಸ್ಥೆಗಳಿಗೆ ನೋಟ್ ಪುಸ್ತಕ, ಕೊಡೆ ಮತು ಸ್ಕೂಲ್ ಬ್ಯಾಗ್‌ಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು. ಬ್ಯಾಂಕಿನ ಅಧ್ಯಕ್ಷ ಸಹಕಾರ ರತ್ನ ಶ್ರೀ ಅನಿಲ್ ಲೋಬೊ ಮತ್ತು ನಿರ್ದೇಶಕರ ಮಂಡಳಿಯ ನೇತೃತ್ವದಲ್ಲಿ ನಡೆಯುತ್ತಿರುವ ಈ ಚಟುವಟಿಕೆಗಳು, ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಸೇವೆ ಸಲ್ಲಿಸಲು ಮತ್ತು ಶೈಕ್ಷಣಿಕ ಸಬಲೀಕರಣವನ್ನು ಉತ್ತೇಜಿಸಲು ಬ್ಯಾಂಕಿನ ಸಮರ್ಪಣೆಯನ್ನು ಪ್ರತಿಬಿಂಬಿಸುತ್ತವೆ.

ಪಡುಕೋಣೆಯ ಸ್ಯೆಂಟ್ ಆಂಟನಿ ಪ್ರಾಥಮಿಕ ಶಾಲೆ, ಗಂಗೊಳ್ಳಿಯ ಸ್ಟೆಲ್ಲಾ ಮಾರಿಸ್ ಪ್ರೌಢಶಾಲೆ, ಕುಂದಾಪುರದ ಸ್ಯೆಂಟ್ ಮೇರಿ ಶಾಲೆ, ಕುಂದಾಪುರದ ಸ್ಯೆಂಟ್ ಜೋಸೆಫ್ ಪ್ರಾಥಮಿಕ ಮತ್ತು ಪ್ರೌಢಶಾಲೆ, ಬ್ರಹ್ಮಾವರದ ನಿರ್ಮಲಾ ಪ್ರೌಢಶಾಲೆ ಮತ್ತು ಕೊಸ್ಮೊಪೊಲಿಟನ್ ಹಿರಿಯ ಪ್ರಾಥಮಿಕ ಶಾಲೆ, ಮಂಗಳೂರಿನ ಕೂಳೂರು ಪ್ರೌಢಶಾಲೆ, ಬಿಜೈಯ ಸ್ಯೆಂಟ್ ಅಂಜೆಲಾ ಹೋಂ, ಡಿ ಮರ್ಸಿಡ್ ಅನಾಥಾಶ್ರಮ, ಪಾನೀರ್, ಪಾಲಡ್ಕದ ಸ್ಯೆಂಟ್ ಇಗ್ನೇಷಿಯಸ್ ಲೊಯೊಲಾ ಶಾಲೆ, ಜೆಪ್ಪುವಿನ ಸ್ಯೆಂಟ್ ರೀಟಾ ಹಿರಿಯ ಪ್ರಾಥಮಿಕ ಶಾಲೆ, ಉರ್ವಾದದ ಲೇಡಿಹಿಲ್ ಹಿರಿಯ ಪ್ರಾಥಮಿಕ ಶಾಲೆ ಮತ್ತು ಪುತ್ತೂರಿನ ಮಾಯ್ ದೆ ದೆವೂಸ್ ಹಿರಿಯ ಪ್ರಾಥಮಿಕ ಶಾಲೆಯ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ನೋಟ್ ಬುಕ್, ಶಾಲಾ ಬ್ಯಾಗ್ ಮತ್ತು ಕೊಡೆಗಳನ್ನು ವಿತರಣೆ ಮಾಡಲಾಯಿತು. ಜೆಪ್ಪುವಿನ ಸಂತ ಅಂತೋನಿ ಆಶ್ರಮದ ನಿವಾಸಿಗಳಿಗೆ ಕೊಡೆಗಳನ್ನು ವಿತರಿಸಲಾಯಿತು.

ನಿರ್ದೇಶಕರಾದ ಡಾ। ಜೆರಾಲ್ಡ್ ಪಿಂಟೊ, ಶ್ರೀ ಎಲ್‌ರೊಯ್ ಕಿರಣ್ ಕ್ರಾಸ್ಟೊ, ಶ್ರೀ ಸುಶಾಂತ್ ಸಲ್ಡಾನಾ, ಶ್ರೀಮತಿ ಶರ್ಮಿಳಾ ಮಿನೇಜಸ್, ಶ್ರೀಮತಿ ಐರಿನ್ ರೆಬೆಲ್ಲೊ, ಶ್ರೀ ರೋಶನ್ ಡಿಸೋಜಾ, ಶ್ರೀ ಹೆರಾಲ್ಡ್ ಜೆ.ಮಾಂತೆರೊ, ಶ್ರೀ ಜೆ.ಪಿ.ರೋಡ್ರಿಗಸ್, ಶ್ರೀ ಅಂಡ್ರ್ಯೂ ಡಿಸೋಜ ಮತ್ತು ಕುಂದಾಪುರ, ಬ್ರಹ್ಮಾವರ, ಅಶೋಕನಗರ, ಕಂಕನಾಡಿ, ಮಾರ್ಗನ್ಸ್‌ಗೇಟ್, ಪುತ್ತೂರು ಮತ್ತು ಉಳ್ಳಾಲ ಶಾಖೆಗಳ ಶಾಖಾ ವ್ಯವಸ್ಥಾಪಕ ಕೂಡ ಭಾಗವಹಿಸಿದ್ದರು.

# ಒನ್‌ಲೈನ್ ನ್ಯೂಸ್

ಈ ಪುಟದಲ್ಲಿನ ಸುದ್ದಿಗಳನ್ನು ಓದಿದ್ದೀರಾ...?
**ಕುತೂಹಲಕಾರಿಯಾದ ಸುದ್ದಿಗಳು** ನಿಮ್ಮ ಕಣ್ಣು ತಪ್ಪಿದ್ದರೆ, ಇಲ್ಲಿವೆ ಓದಿ.

- ಬೆಂಗಳೂರು ಹಾಲು ಒಕ್ಕೂಟವು ಮಣ್ಣಿನಲ್ಲಿ ಕರಗಬಲ್ಲ ಪ್ಲಾಸ್ಟಿಕ್‌ನಲ್ಲಿ ಹಾಲಿನ ಉತ್ಪನ್ನಗಳನ್ನು ಗ್ರಾಹಕರಿಗೆ ತಲುಪಿಸುವ ಮೂಲಕ ಪರಿಸರ ಸ್ನೇಹಿ ಹೆಜ್ಜೆ ಇರಿಸಿದೆ. ಬಮೂಲ್ ತನ್ನ ವ್ಯಾಪ್ತಿಗೆ ಬರುವ ರಾಮನಗರ ಜಿಲ್ಲೆ ಕನಕಪುರ ತಾಲ್ಲೂಕಿನ ಶಿವನಹಳ್ಳಿಯಲ್ಲಿರುವ ಮೆಗಾ ಡೇರಿ ಘಟಕವು ಇಂತಹದ್ದೊಂದು ಪ್ರಯೋಗಕ್ಕೆ ಸಾಕ್ಷಿಯಾಗಿದ್ದು, ಇದು ದೇಶದಲ್ಲೇ ಮೊದಲು ಎನಿಸಿದೆ.
- ಪೋರ್ಚುಗಲ್ ಫುಟ್ಬಾಲ್ ಸೂಪರ್ ಸ್ಟಾರ್ ಕ್ರಿಸ್ಟಿಯಾನೋ ರೊನಾಲ್ಡೋ ಸೌದಿ ಫುಟ್ಬಾಲ್ ಕ್ಲಬ್ ಆಲ್ ನಾಸೀರ್ ತಂಡದ ಜೊತೆಗಿನ ತಮ್ಮ ಒಪ್ಪಂದವನ್ನು ನವೀಕರಿಸಿದ್ದು, ಈ ಹೊಸ ಒಪ್ಪಂದದ ಪ್ರಕಾರ ರೊನಾಲ್ಡೊ ವಾರ್ಷಿಕ 178 ಮಿಲಿಯನ್ ಪೌಂಡ್ ಅಂದರೆ, ಪ್ರತಿ ವರ್ಷ ಸುಮಾರು ರೂ. 2 ಸಾವಿರ ಕೋಟಿ ಸಂಭಾವನೆ ಪಡೆಯಲಿದ್ದಾರೆ.
- ದೆಹಲಿ ಸಮೀಪದ ಗುರುಗ್ರಾಮದ ಫೋರ್ಟಿಸ್ ಸ್ಮಾರಕ ಸಂಶೋಧನಾ ಸಂಸ್ಥೆಯಲ್ಲಿ ವೈದ್ಯರ ತಂಡ ಒಂದು ಗಂಟೆ ಕಾಲ ನಡೆಸಿದ ಶಸ್ತ್ರಚಿಕಿತ್ಸೆಯಲ್ಲಿ 70 ವರ್ಷದ ವ್ಯಕ್ತಿಯ ಪಿತ್ತಕೋಶದಿಂದ 8,125 ಕಲ್ಲುಗಳನ್ನು ಹೊರತೆಗೆಯಲಾಗಿದ್ದು, ಕಲ್ಲುಗಳನ್ನು ಎಣಿಸಲು ತಂಡಕ್ಕೆ ಸುಮಾರು ಆರು ಗಂಟೆಗಳು ಬೇಕಾಯಿತು ಎಂದು ಆಸ್ಪತ್ರೆ ಹೇಳಿಕೆಯಲ್ಲಿ ತಿಳಿಸಿದೆ.
- ವಿಜಯಪುರ ಜಿಲ್ಲೆಯ ಮನಗೂಳಿ ಕೆನರಾ ಬ್ಯಾಂಕ್ ಶಾಖೆಯಲ್ಲಿ ರೂ. 53.26 ಕೋಟಿ ಮೌಲ್ಯದ ಚಿನ್ನ ಮತ್ತು ನಗದು ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ಯಾಂಕ್ ಮ್ಯಾನೇಜರ್ ವಿಜಯಕುಮಾರ್ ಮಿರಿಯಾಲ ಸೇರಿದಂತೆ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.
- ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ಯಶಸ್ವಿಯಾಗಿ ಪ್ರವೇಶಿಸುವ ಮೂಲಕ ಮೊದಲ ಗಗನಯಾನಿ ಎಂಬ ಕೀರ್ತಿಗೆ ಭಾಜನರಾಗಿದ್ದಾರೆ. 41 ವರ್ಷಗಳ ಹಿಂದೆ ರಾಕೇಶ್ ಶರ್ಮಾ ಅವರು ಅಂತರಿಕ್ಷ ಯಾನ ಕೈಗೊಂಡಿದ್ದರು.

## ಓದುಗರ ಅನಿಸಿಕೆ...



**ಮೂರು ಪಟ್ಟು ಹೆಚ್ಚಳ:** 2014ರಲ್ಲಿ ತಾವು ಅಧಿಕಾರಕ್ಕೆ ಬಂದರೆ ಸ್ವಿಸ್ ಬ್ಯಾಂಕುಗಳಲ್ಲಿ ಇರಿಸಿರುವ ಕಪ್ಪು ಹಣವನ್ನು ಹಿಂದಕ್ಕೆ ತಂದು ದೇಶದ ಎಲ್ಲ ಪ್ರಜೆಗಳಿಗೆ ತಲಾ ರೂ. 15ಲಕ್ಷದಂತೆ ಹಂಚುವುದಾಗಿ ಘೋಷಣೆ ಮಾಡಲಾಗಿತ್ತು. ಅದಾಗಿ 11ವರ್ಷಗಳೇ ಕಳೆದು ಹೋಗಿವೆ. ಹಣ ಹಿಂದೆ ತರುವುದಿರಲಿ, ಸ್ವಿಸ್ ಬ್ಯಾಂಕುಗಳಲ್ಲಿ ಇರುವ ನಮ್ಮ ದೇಶದವರ ಹಣ ರೂ. 37,600 ಕೋಟಿಗೆ ತಲುಪಿದೆ ಎಂದು ಸ್ವಿಸ್ ನ್ಯಾಷನಲ್ ಬ್ಯಾಂಕ್ ಬಹಿರಂಗಪಡಿಸಿದೆ.

**ಕೆ. ರಾಮಚಂದ್ರ ರಾವ್,** ಬೆಂಗಳೂರು

**ದೊಡ್ಡ ಗುಣ ಬೆಳೆಸಿಕೊಳ್ಳಬೇಕು :** ಈ ಕ್ಷೇತ್ರಕ್ಕೆ ಬಂದವರು ಸಹಾಯ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು. ಜಾತಿ, ಧರ್ಮವನ್ನು ಮೀರಿ ಸಮಾಜದ ಎಲ್ಲ ಬಡವರಿಗೆ ಸಹಾಯ ಮಾಡಬೇಕೆನ್ನುವ ಕಾಳಜಿ, ದೊಡ್ಡ ಗುಣವನ್ನು ಸಹಕಾರಿ ಕ್ಷೇತ್ರದಲ್ಲಿ ತೊಡಗಿಸಿಕೊಂಡವರು ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿರುವುದು ಸರಿಯಾಗಿದೆ.

**ಎಂ. ಅನಂತನಾರಾಯಣ ಸ್ವಾಮಿ, ಬಳ್ಳಾರಿ**

ಸಂಪಾದಕರು :
**ಪುಂಡಲೀಕ ಎನ್. ಕೇರೂರೆ,**
ಮುಖ್ಯಕಾರ್ಯನಿರ್ವಹಣಾಧಿಕಾರಿ,
ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ.,
ಬೆಂಗಳೂರು.

**ಇವರಿಗೆ,**

Edited, Published and printed by: Karnataka State Co-operative Urban Banks Federation Ltd., Bangalore - 560027.
Published at : # 132, K.H. Road, Bangalore - 560027.
Printed at : Navarathna Printers, #35, 3rd Cross, Sudhamanagar, Bangalore - 560027.